ಕರ್ನಾಟಕ ಸರ್ಕಾರ

## ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ:ಇ-ಆಡಳಿತ:ಮಂ.ಹು.ಪ:01/2020-21 ದಿನಾಂಕ:-22-10-2020

**-: ಜ್ಞಾಪನಾ :-**

ವಿಷಯ:- ಜಿಲ್ಲಾ ಹಂತದಲ್ಲಿ ಖಾಲಿ ಹುದ್ದೆ ಮಾಹಿತಿಯನ್ನು ಪರಿಶೀಲನೆ ಮಾಡುವ ಬಗ್ಗೆ.
ಉಲ್ಲೇಖ: ಈ ಕಛೇರಿಯ ಜ್ಞಾಪನಾ ಸಂಖ್ಯೆ:ಇ-ಆಡಳಿತ:ಮಂ.ಹು.ಪ:01/2020-21 ದಿನಾಂಕ:-02-09-2020

------

ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಈ ಹಿಂದಿನ ಸಾಲಿನ ವರ್ಗಾವಣೆ ಪ್ರಾರಂಭದಲ್ಲಿ ನೀಡಿದಂತೆ ವಿಷಯಾವಾರು ಮಂಜೂರಾದ ಹುದ್ದೆಗಳು, ಪ್ರಸ್ತುತ ದಿನಾಂಕದಂತೆ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರ ಪ್ರಾಥಮಿಕ ಮಾಹಿತಿಯನ್ನು ಪರಿಶೀಲಿಸುವ ಬಗ್ಗೆ ಉಲ್ಲೇಖ-1 ರ ಸುತ್ತೋಲೆಯಲ್ಲಿ ಸೂಚಿಸಲಾಗಿತ್ತು. ಪರಿಶೀಲನಾ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ಕ್ರಮಗಳು, ಪರಿಗಣಿಸಬೇಕಾದ ಅಂಶಗಳ ಬಗ್ಗೆ ವಿಡಿಯೋ ಕಾನ್‌ಫರೆನ್ಸ್‌ಗಳಲ್ಲಿ ಸವಿವರವಾಗಿ ತಿಳಿಸಲಾಗಿತ್ತು.

ಕ್ಷೇತ್ರಶಿಕ್ಷಣಾಧಿಕಾರಿಗಳು ಪರಿಶೀಲಿಸಿ ಕಾರಣ ಸಹಿತ ತಿರಸ್ಕರಿಸಿದ ಮಾಹಿತಿಯನ್ನು ರಾಜ್ಯ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ. ಪ್ರಸ್ತುತ ಪ್ರೌಢಶಾಲಾ ಮುಖ್ಯಶಿಕ್ಷಕರ ವೃಂದದ ಮಾಹಿತಿಯ ರಾಜ್ಯಹಂತದ ಪರಿಶೀಲನೆ ಪೂರ್ಣಗೊಂಡಿದ್ದು ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರ ಲಾಗಿನ್ ನಲ್ಲಿ ಪರಿಶೀಲನೆಗೆ ಲಭ್ಯಗೊಳಿಸಲಾಗಿದೆ, ಮತ್ತು ಸದರಿ ಮಾಹಿತಿಯನ್ನು ಪರಿಶೀಲಿಸಿ ವ್ಯತ್ಯಾಸಗಳಿದ್ದಲ್ಲಿ ಷರಾದೊಂದಿಗೆ ಈ-ಮೇಲ್ ಮೂಲಕ ದಿನಾಂಕ:-15-10-2020 ರೊಳಗೆ ಈ ಕಛೇರಿಗೆ ಸಲ್ಲಿಸಲು ತಿಳಿಸಲಾಗಿತ್ತು. ಆದರೆ ಕೆಲವು ಜಿಲ್ಲೆಗಳಿಂದ ಮಾತ್ರ ಮಾಹಿತಿ ಸಲ್ಲಿಕೆಯಾಗಿದ್ದು, ಅದರಲ್ಲಿ ಬಿ.ಇ.ಓ.ರವರ ಪರಿಶೀಲನೆಗೂ ಉಪನಿರ್ದೇಶಕರ ಪರಿಶೀಲನಾ ಅಂಶಗಳಿಗೂ ವ್ಯತ್ಯಾಸಗಳಿರುವುದನ್ನು ಗಮನಿಸಲಾಗಿದೆ.

ಆದ್ದರಿಂದ ಜಿಲ್ಲಾ ಹಂತದಲ್ಲಿ ಶಾಲಾವಾರು, ವೃಂದವಾರು ಖಾಲಿ ಹುದ್ದೆ ಮಾಹಿತಿ ಪರಿಶೀಲನಾ ಕಾರ್ಯವನ್ನು ಆನ್ ಲೈನ್ ಮೂಲಕವೇ ನಡೆಸಲು ತಂತ್ರಾಂಶದಲ್ಲಿ ಅವಕಾಶ ಮಾಡಲಾಗಿದೆ. ಪ್ರಸ್ತುತ ಪ್ರೌಢಶಾಲಾ ಮುಖ್ಯಶಿಕ್ಷಕರ ವೃಂದದ ಖಾಲಿ ಹುದ್ದೆ ಮಾಹಿತಿಯನ್ನು ಉಪನಿರ್ದೇಶಕರು(ಆಡಳಿತ) ಇವರ ಲಾಗಿನ್ ನಲ್ಲಿ ಲಭ್ಯಗೊಳಿಸಿದ್ದು, ಈ ಪತ್ರದೊಂದಿಗೆ ಅಡಕಗೊಳಿಸಿದ ಕೈಪಿಡಿಯಂತೆ ನಿಖರವಾದ ಮಾಹಿತಿಯನ್ನು ದಿನಾಂಕ:-23-10-2020ರೊಳಗೆ ಕಡ್ಡಾಯವಾಗಿ ಪೂರ್ಣಗೊಳಿಸಲು ಸೂಚಿಸಿದೆ.

ರಾಜ್ಯ ಹಂತದಲ್ಲಿ ಪರಿಶೀಲನೆ ಪೂರ್ಣಗೊಳಿಸಿದಂತೆ ಉಳಿದ ವೃಂದಗಳ ಖಾಲಿ ಹುದ್ದೆ ಮಾಹಿತಿಯನ್ನು ಪರಿಶೀಲನೆಗೆ ನೀಡಲಾಗುವುದು ಮತ್ತು ಮಾಹಿತಿಯನ್ನೂ ನೀಡಲಾಗುವುದು. ಸದರಿ ಕಾರ್ಯವು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕಾಗಿರುವುದರಿಂದ ಪ್ರಥಮ ಆದ್ಯತೆಯ ಮೇಲೆ ಪರಿಶೀಲನಾ ಕಾರ್ಯವನ್ನು ಪೂರ್ಣಗೊಳಿಸಲು ಸೂಚಿಸಿದೆ.

ಈ ಪ್ರಕ್ರಿಯೆಯಲ್ಲಿ ಯಾವುದೇ ಗೊಂದಲಗಳಿದ್ದಲ್ಲಿ ಅಥವಾ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ transfercellcpi@gmail.com ಗೆ ಈ-ಮೇಲ್ ಮೂಲಕ ಸಂಪರ್ಕಿಸುವುದು.

[ಅನ್ಬುಕುಮಾರ್ .ವಿ.]
**ಆಯುಕ್ತರು**

ಪ್ರತಿಯನ್ನು

1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು., ಇವರಿಗೆ ಮಾಹಿತಿಗಾಗಿ.
2. ಅಪರ ಆಯುಕ್ತರು, ಧಾರವಾಡ ಮತ್ತು ಕಲ್ಬುರ್ಗಿ ಇವರಿಗೆ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ
3. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ), ಆಯುಕ್ತರ ಕಛೇರಿ, ಬೆಂಗಳೂರು., ಇವರಿಗೆ ಮಾಹಿತಿಗಾಗಿ
4. ನಿರ್ದೇಶಕರು(ಪ್ರೌಢ ಶಿಕ್ಷಣ), ಆಯುಕ್ತರ ಕಛೇರಿ, ಬೆಂಗಳೂರು., ಇವರಿಗೆ ಮಾಹಿತಿಗಾಗಿ
5. ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಸೂಕ್ತ ಕ್ರಮಕ್ಕಾಗಿ
6. ಕಛೇರಿ ಪ್ರತಿ

# Teacher Transfer
# (District Vacancy Verification)

Developed By

ICT infracon